ತಂತಿ ವಿಳಾಸ: ಯೂನಿರೆಜ್
ದೂರವಾಣಿ ಸಂಖ್ಯೆ: 2419677/2419361

e-mail: registrar@uni-mysore.ac.in
www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ಸ್ಥಾಪನೆ:1916
(ನ್ಯಾಕ್ ಸಂಸ್ಥೆಯ ಮರು ಮಾನ್ಯತೆಯಲ್ಲಿ 'ಎ' ಗ್ರೇಡ್ ಪಡೆದಿದೆ)
(ಎನ್.ಐ.ಆರ್.ಎಫ್.-2024: ರಾಜ್ಯ ಸಾರ್ವಜನಿಕ ವಿಶ್ವವಿದ್ಯಾನಿಲಯ ವರ್ಗದಲ್ಲಿ 19ನೇ ಸ್ಥಾನ, ವಿಶ್ವವಿದ್ಯಾನಿಲಯ ವರ್ಗದಲ್ಲಿ 54ನೇ ಸ್ಥಾನ ಮತ್ತು ಒಟ್ಟಾರೆ ವರ್ಗದಲ್ಲಿ 86ನೇ ಸ್ಥಾನ)

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್‌ಭವನ, ಮೈಸೂರು
ದಿನಾಂಕ 30.07.2025

ಸಂಖ್ಯೆ:ಜಿಎಲ್5/03/2023–24

## ಸುತ್ತೋಲೆ

ವಿಷಯ: ಪ್ರತಿ ವರ್ಷ ಆಗಸ್ಟ್–01 ರಂದು ಡಾ. ಮಹಾಂತ ಶಿವಯೋಗಿಗಳ ಜನ್ಮ ದಿನಾಚರಣೆಯನ್ನು ವ್ಯಸನಮುಕ್ತ ದಿನಾಚರಣೆಯನ್ನಾಗಿ ಆಚರಿಸುವ ಬಗ್ಗೆ.

ಉಲ್ಲೇಖ:1.ಶ್ರೀ.ಮ.ನಿ.ಪ್ರ.ಗುರುಮಹಾಂತಶ್ರೀಗಳು, ಚಿತರಗಿ ಶ್ರೀ ವಿಜಯ ಮಹಾಂತೇಶ ಸಂಸ್ಥಾನ ಮಠ, ಇಲಕಲ್ಲ, ಇವರ ಪತ್ರ ಸಂಖ್ಯೆ:ಮುಕ್ಕಾಂ;ಇಲಕಲ್ಲ, ದಿನಾಂಕ:15.07.2025

2.ಸರ್ಕಾರದ ಅಧೀನ ಕಾರ್ಯದರ್ಶಿ, ಕನ್ನಡ ಸಂಸ್ಕೃತಿ ಮತ್ತು ವಾರ್ತಾ ಇಲಾಖೆ ಇವರ ಪತ್ರ ಸಂಖ್ಯೆ:ಕೆಸಿಐ–ಪಿಐಪಿ/121/2022 ಬೆಂಗಳೂರು, ದಿ:23.05.2022

3.ಕಾರ್ಯದರ್ಶಿ, ಕರ್ನಾಟಕ ರಾಜ್ಯ ಮಧ್ಯಪಾನ ಸಂಯಮ ಮಂಡಳಿ, ಇವರ ಏಕಕಡತ ಸಂಖ್ಯೆ:ಕೆ.ಎಸ್.ಟಿಬಿ/ಇಎಸ್/ಟಿ1/ಪಾ.ನ/2022–23, ದಿನಾಂಕ: 05.05.2022

*****

ಸರ್ಕಾರದ ಆದೇಶಾನುಸಾರ ಪ್ರತಿ ವರ್ಷ ಆಗಸ್ಟ್–01 ರಂದು **ಡಾ.ಮಹಾಂತ ಶಿವಯೋಗಿಗಳ ಜನ್ಮ ದಿನಾಚರಣೆಯನ್ನು ವ್ಯಸನಮುಕ್ತ ದಿನಾಚರಣೆ**ಯನ್ನಾಗಿ ಆಚರಿಸಲು ಉಲ್ಲೇಖಿತ(2)ರ ಆದೇಶದಲ್ಲಿ ತಿಳಿಸಿರುವ ಹಿನ್ನೆಲೆಯಲ್ಲಿ ವಿಶ್ವವಿದ್ಯಾನಿಲಯದ ಎಲ್ಲಾ ಸ್ನಾತಕೋತ್ತರ ವಿಭಾಗಗಳು, ಘಟಕ/ಸಂಯೋಜಿತ ಕಾಲೇಜುಗಳಲ್ಲಿ ದಿನಾಂಕ: 01.08.2025 ರಂದು **"ವ್ಯಸನಮುಕ್ತ ದಿನಾಚರಣೆ"**ಯನ್ನಾಗಿ ಆಚರಿಸಲು ವಿದ್ಯಾರ್ಥಿಗಳಿಂದ ಪ್ರತಿಜ್ಞಾ ವಿಧಿ ಸ್ವೀಕರಿಸಲು [ಹಿಂಪುಟದಲ್ಲಿ ಮುದ್ರಿಸಿರುವಂತೆ] ಎಲ್ಲಾ ಅಧ್ಯಯನ ವಿಭಾಗಗಳ ಅಧ್ಯಕ್ಷರು, ನಿರ್ದೇಶಕರು ಮತ್ತು ಘಟಕ/ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಈ ಮೂಲಕ ತಿಳಿಸಲಾಗಿದೆ.

(signature) 31/7/2025
**ಕುಲಸಚಿವರು**
**ಮೈಸೂರು ವಿಶ್ವವಿದ್ಯಾನಿಲಯ**
**ಮೈಸೂರು-570 005**

ಇವರಿಗೆ:

1. ಅಧ್ಯಕ್ಷರು/ನಿರ್ದೇಶಕರು, ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳು, ಮಾ.ಗಂ.,ಮೈಸೂರು.
2. ಎಲ್ಲಾ ಬಟವಾಡೆ ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು
3. ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳ ಪ್ರಾಂಶುಪಾಲರು, ಮೈವಿವಿ, ಮೈಸೂರು
4. ನಿರ್ದೇಶಕರು, ಕಾಲೇಜು ಅಭಿವೃದ್ಧಿಮಂಡಳಿ ಮೌಲ್ಯಭವನ ಮಾನಸಗಂಗೋತ್ರಿ, ಮೈಸೂರು– ಎಲ್ಲಾ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರ ಗಮನಕ್ಕೆ ತರಲು ಕ್ರಮ ಕೈಗೊಳ್ಳುವುದು.
5. ನಿರ್ದೇಶಕರು, ಐ.ಸಿ.ಡಿ, ಗಣಕ ವಿಜ್ಞಾನ, ಮಾನಸಗಂಗೋತ್ರಿ, ಮೈಸೂರು –ಸದರಿ ಪತ್ರವನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಕೋರಲಾಗಿದೆ.
6. ಮಾನ್ಯ ಕುಲಪತಿ /ಕುಲಸಚಿವ/ಆಪ್ತಸಹಾಯಕರು, ಮೈವಿವಿ, ಮೈಸೂರು

ಪ್ರತಿ:

1.ಶ್ರೀ.ಮ.ನಿ.ಪ್ರ.ಗುರುಮಹಾಂತಶ್ರೀಗಳು, ಚಿತರಗಿ ಶ್ರೀ ವಿಜಯ ಮಹಾಂತೇಶ ಸಂಸ್ಥಾನ ಮಠ, ಇಲಕಲ್ಲ ತಾಲ್ಲೂಕು, ಬಾಗಲಕೋಟೆ ಜಿಲ್ಲೆ–587125

2. ಕಛೇರಿ ಪ್ರತಿ.

ಮ.ತೀ.ನೋ

**ಮಧ್ಯಪಾನ, ಮಾದಕ ವಸ್ತು, ತಂಬಾಕು ವಸ್ತುಗಳ ವ್ಯಸನ ಮುಕ್ತಗೊಳಿಸುವ ಪ್ರತಿಜ್ಞಾ ವಿಧಿ**

ಮಧ್ಯಪಾನ, ಮಾದಕ ವಸ್ತು, ತಂಬಾಕು ವಸ್ತುಗಳ ಸೇವನೆಯು ನನಗೆ ಮತ್ತು ಮಾನವ ಸಮಾಜಕ್ಕೆ ಮಾರಕವೆಂದು, ಇದರಿಂದ ಮಾನವನ ದೇಹವಲ್ಲದೇ ಮನಸ್ಸು ಮತ್ತು ಸ್ವಾಸ್ಥ್ಯ ಸಮಾಜ ಅನಾರೋಗ್ಯ ಪೀಡಿತವಾಗುತ್ತಿರುವುದು ಮತ್ತು ಗ್ರಾಮೀಣಾ ಹಾಗೂ ನಗರ ಪ್ರದೇಶದ ಯುವ ಜನತೆ ಇದರ ದಾಸ್ಯಕ್ಕೆ ಒಳಗಾಗುತ್ತಿರುವುದು ತಿಳಿದಿದೆ. ಇದರಿಂದ ಮಾನವನ ಆರ್ಥಿಕ, ಸಾಮಾಜಿಕ ಸ್ಥಿತಿ ಅಧೋಗತಿಗೆ ಇಳಿಯುತ್ತಿದೆ. ಆದ್ದರಿಂದ ಪರಮ ಪೂಜ್ಯ ಶ್ರೀ.ಮ.ನಿ.ಪ್ರ.ಡಾ:ಮಹಾಂತಶಿವಯೋಗಿ ಸ್ವಾಮೀಜಿಗಳ ಜನ್ಮದಿನದ ಈ ಶುಭದಿನದಂದು ನಾನು ಮಧ್ಯಪಾನ, ಮಾದಕ ವಸ್ತು, ತಂಬಾಕು ವಸ್ತುಗಳನ್ನು ತ್ಯಜಿಸುತ್ತೇನೆ ಹಾಗೂ ಇನ್ನೆಂದಿಗೂ ಮುಟ್ಟುವುದಿಲ್ಲವೆಂದು ಪ್ರತಿಜ್ಞಾವಿಧಿ ಕೈಗೊಳ್ಳುತ್ತೇನೆ.